ನಿರ್ವಹಿಸುತ್ತಿರುವ ದಿನಗೂಲಿ ನೌಕರರ ಒಟ್ಟು ಸಂಖ್ಯೆ 4692.

ಆ) ಮಾನ್ಯ ಸರ್ವೋಚ್ಚ ನ್ಯಾಯಾಲಯವು ಉಮಾದೇವಿ ಪ್ರಕರಣದಲ್ಲಿ ನೀಡಿರುವ ತೀರ್ಪಿನ ಪ್ರಕಾರ ದಿನಗೂಲಿ ನೌಕರರನ್ನು ಸಕ್ರಮಗೊಳಿಸಲು ಕಾನೂನಿನ ಅಡಿಯಲ್ಲಿ ಅವಕಾಶ ಇರುವುದಿಲ್ಲ. ಆದ್ದರಿಂದ, ಯಾವುದೇ ಕ್ರಮಗಳನ್ನು ಕೈಗೊಂಡಿರುವುದಿಲ್ಲ.

ರೈತರ ಸಾಗುವಳಿ ಜಮೀನು

366 (962) ಶ್ರೀ ಚಂದ್ರಶೇಖರ್ ಕೆ.ಬಿ. (ಕೆ.ಆರ್.ಪೇಟೆ) :- ಮಾನ್ಯ ಅರಣ್ಯ ಸಚಿವರು ದಯವಿಟ್ಟು ಈ ಪ್ರಶ್ನೆಗಳಿಗೆ ಉತ್ತರಿಸುವರೆ:-

ಅ) ಮಂಡ್ಯ ಜಿಲ್ಲೆ ಕೆ.ಆರ್. ಪೇಟೆ ತಾಲ್ಲೂಕಿನಲ್ಲಿ ಅರಣ್ಯ ಇಲಾಖೆಯ ಒಟ್ಟು ಜಮೀನಿನ ವಿಸ್ತೀರ್ಣವೆಷ್ಟು;

ಆ) ರೈತರು ಸಾಗುವಳಿ ಮಾಡುತ್ತಿರುವ ಜಮೀನುಗಳಲ್ಲಿ ಆರ್.ಟಿ.ಸಿ. ಕಾಲಂನಲ್ಲಿ ಅರಣ್ಯ ಎಂದು ನಮೂದಾಗಿರುವ ಒಟ್ಟು ಜಮೀನು ಎಷ್ಟು (ಉದಾ: ಹೆರಗನಹಳ್ಳಿ ಸರ್ವೆ ನಂ. 129 ಮರಟಿಕೊಪ್ಪಲು ಇತ್ಯಾದಿ)

ಇ) ರೈತರ ಕೃಷಿ ಸಾಗುವಳಿ ಜಮೀನಿನಲ್ಲಿ ಅರಣ್ಯ ಎಂದು ನಮೂದಾಗಿರುದನ್ನು ತಿದ್ದುಪಡಿ ಮಾಡುವ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; ರೈತರಿಗೆ ಮೇಲಿನ ಜಮೀನುಗಳನ್ನು ಬಿಡುಗಡೆ ಮಾಡಲು ಸರ್ಕಾರಕ್ಕೆ ಎಷ್ಟು ದಿನಗಳ ಕಾಲಾವಕಾಶ ಬೇಕಾಗುವುದು?

ಶ್ರೀ ಸಿ.ಪಿ. ಯೋಗೇಶ್ವರ (ಅರಣ್ಯ ಸಚಿವರು) :-

ಅ) 10552.26 ಹೆಕ್ಟೇರ್

ಆ) ಹೆರಗನಹಳ್ಳಿ ಸ.ನಂ. 129 ರಲ್ಲಿ ಒಟ್ಟು 54.44 ಹೆಕ್ಟೇರ್ ಪ್ರದೇಶದ ಭೂಮಿಯನ್ನು ಕಂದಾಯ ಇಲಾಖೆಯಿಂದ ಅರಣ್ಯ ಇಲಾಖೆಗೆ ಹಸ್ತಾಂತರ ಮಾಡಿರುತ್ತಾರೆ. ಮತ್ತು ಈ ಜಮೀನುಗಳು ಆರ್‌ಟಿಸಿಯಲ್ಲಿ ನಮೂದಿಸಿರುವಂತೆ ಅರಣ್ಯ ಇಲಾಖೆಯ ವ್ಯಾಪ್ತಿಯಲ್ಲಿರುತ್ತದೆ.

ಇ) ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪಿನ ಪ್ರಕಾರ ಯಾವುದೇ ಜಮೀನು ಸರ್ಕಾರಿ ದಾಖಲೆಗಳಲ್ಲಿ "ಅರಣ್ಯ" ಎಂದು ನಮೂದಿಸಿದ್ದಲ್ಲಿ ಅದನ್ನು ಅರಣ್ಯವೆಂದು ಪರಿಗಣಿಸಬೇಕಾಗಿರುತ್ತದೆ. ಆದ್ದರಿಂದ ಇಂತಹ ಜಮೀನುಗಳನ್ನು ರೈತರಿಗೆ ಬಿಡುಗಡೆ ಮಾಡಲು ಅವಕಾಶವಿರುವುದಿಲ್ಲ.